**ಕರ್ನಾಟಕ ಸರ್ಕಾರ**

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.10/2021**

ಪಿ.ಡಬ್ಲ್ಯೂ: 3

ಸಿ.ಡಬ್ಲ್ಯೂ: 2

ಸಾಕ್ಷಿದಾರರ ಹೆಸರು : ಮಂಜುನಾಥ್

ತಂದೆಯ ಹೆಸರು: :ಗಣೇಶಪ್ಪ

ವಯಸ್ಸು : **36 ವರ್ಷ**

ಉದ್ಯೋಗ : ವ್ಯವಸಾಯ

ವಾಸಸ್ಥಳ : ಉಡೇವಾ ಗ್ರಾಮ

**ದಿನಾಂಕ: 03-02-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಈಗ್ಗೆ ಸುಮಾರು 5-6 ವರ್ಷಗಳ ಹಿಂದೆ ನಾನು ಸಿದ್ದರಹಳ್ಳಿ ಗ್ರಾಮದಲ್ಲಿ ಸಂಜೆ 4-00 ಗಂಟೆ ಸಮಯದಲ್ಲಿ ಪೊಲೀಸರು ಗಲಾಟೆಯ ವಿಚಾರವಾಗಿ ಮಹಜರ್ ಕ್ರಮ ಜರುಗಿಸಿದ್ದು, ಸದರಿ ಮಹಜರ್ ಗೆ ನಾನು ಸಹಿಮಾಡಿರುತ್ತೇನೆ. ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರಗಳು ನನಗೆ ತಿಳಿದಿರುತ್ತದೆ. ನನ್ನ ಸಮಕ್ಷಮದಲ್ಲಿ ಪೊಲೀಸರು ಒಂದು ಕಲ್ಲನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಮುದ್ದೆಮಾಲನ್ನು ನೋಡಿ ಗುರುತಿಸಿರುತ್ತಾರೆ..

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಯು ನಿಪಿ-3 ಮತ್ತು 4 ರಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲು : ಆರೋಪಿ ಪರ** ಶ್ರೀ ಬಿ ಟಿ ಕೆ **ವಕೀಲರಿಂದ.**

ಮಹಜರ್ ಗೆ ಸಹಿ ಹಾಕಿದ ದಿನಾಂಕ ನನಗೆ ನೆನಪಿಲ್ಲ. ಪೊಲೀಸರು ಮಹಜರ್ ನ್ನು ನನ್ನ ಮುಂದೆ ಬರೆದಿರುತ್ತಾರೆ. ಅದರಲ್ಲಿ ಬರೆದಿರುವ ವಿಚಾರವನ್ನು ನನಗೆ ಓದಿ ತಿಳಿಸಿರುವುದಿಲ್ಲ. ಚಾಸಾ-1 ನನ್ನ ಸ್ವಂತ ತಂಗಿ. ನಾನು ಉಡೇವಾ ಗ್ರಾಮದಲ್ಲಿ ವಾಸವಾಗಿದ್ದೇನೆ. ನಾನು ಮಹಜರ್ ಗೆ

ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ಪೊಲೀಸರು ಯಾವುದೇ ಮಹಜರ್ ಕ್ರಮವನ್ನು ಜರುಗಿಸಿರುವುದಿಲ್ಲ, ಚಾಸಾ-1 ರವರು ನಿಮ್ಮ ತಂಗಿಯಾದ ಕಾರಣ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿಯುತ್ತಿದ್ದಿರಾ ಎಂದರೆ ಸರಿಯಲ್ಲ. ಆರೋಪಿಗೂ ಹಾಗೂ ಚಾಸಾ-1 ರವರ ಗಂಡನಾದ ನಾರಾಯಣಸ್ವಾಮಿರವರ ನಡುವೆ ಸಿವಿಲ್ ವ್ಯಾಜ್ಯಗಳು ಇದೆ ನ್ಯಾಯಾಲಯದಲ್ಲಿ ಬಾಕಿ ಇದೆ ಎಂದರೆ ಸರಿ.

**ಮರುವಿಚಾರಣೆ:** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

**ಓ. ಕೇ. ಸ. ಇ. ಎ. ಒ.**

ಸಹಿ /-

1 ನೇ **ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**